ದಿಃ 26-09-2019 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀಮತಿ ಎಮ್ ಪಿ ಎ . ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೆನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಮಾನ್ಯ ನ್ಯಾಯಾಲಯುಕ್ಕೆ ಮದನಳ್ಳಿ ಗ್ರಾಮದ ಮನೆ ನಂಬರ 26 ನೇದ್ದರ 2009-10 ನೇ ಸಾಲಿನ ಕರ ಆಕರಣೆ ಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, 2017-18 ನೇ ಸಾಲಿನ ಕರ ಆಕರಣೆ ಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ನಾನು ದಿನಾಂಕ 28-03-2019 ರಂದು ಗ್ರಾಮ ಪಂಚಾಯತ ದುಸಗಿ ಇವರಿಗೆ ನೀಡಿರುವ ಅರ್ಜಿಯ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ಅಂಚೆ ಇಲಾಖೆಯ ರಸೀದಿ ಮತ್ತು ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 4 ಮತ್ತು 5 ಎಂದು ಗುರುತಿಸಲಾಯಿತು. ಓ ಎಸ್ 10/2004 ನೇದ್ದರ ತಿದ್ದುಪಡಿ ವಾದ ಪತ್ರದ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು , ಡಿಕ್ರಿ ಪ್ರತಿಯ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 7 ಎಂದು, ಆರ್ ಎ ನಂಬರ 30/2017 ನೇದ್ದರ ತಿರ್ಪು ಮತ್ತು ಡಿಕ್ರಿಯ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 8 ಮತ್ತು 9 ಎಂದು, 2 ಭಾವಚಿತ್ರಗಳನ್ನು ಮತ್ತು ಸಿಡಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು 10 ಮತ್ತು 10 ಎ ಎಂದು ಗುರುತಿಸಲಾಯಿತು. ಆದ್ದರಿಂದ ನನ್ನ ವಾದ ಪತ್ರದಲ್ಲಿ ತಿಳಿಸಿದಂತೆ ನನ್ನ ಪ್ರಾರ್ಥನೆಯನ್ನು ಪುರಸ್ಕರಿಸಬೇಕೆಂದು ವಿನಂತಿ ಇರುತ್ತದೆ.

( ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರಾದ ಶ್ರೀಸಿ ವಿ ಎನ್ ವಕೀಲರು ಸಾಕ್ಷಿಯ ಪಾಟೀ ಸವಾಲಿಗೆ ಸಮಯ ಕೇಳಿದ್ದರಿಂದ ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.